# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2176 |
| ಸದಸ್ಯರ ಹೆಸರು | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | 18.03.2022 |
| ಉತ್ತರಿಸುವ ಸಚಿವರು | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

******

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಇ-ಸ್ವತ್ತು ತಂತ್ರಾಂಶದ ದೋಷದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರವಾದ ಮಾಹಿತಿ ನೀಡುವುದು) | ಬಂದಿದೆ.<br>ಇ-ಸ್ವತ್ತು ತಂತ್ರಾಂಶಕ್ಕೆ ಸಂಬಂಧಪಟ್ಟಂತೆ, ಕೆಲವು ಬಾರಿ ಸರ್ವರ್ ಸಮಸ್ಯೆಗಳು ಉಂಟಾಗುತ್ತಿದ್ದವು. ಇ-ಸ್ವತ್ತು ತಂತ್ರಾಂಶಕ್ಕೆ ಪ್ರತ್ಯೇಕವಾಗಿ 2 ಸರ್ವರ್ ಗಳನ್ನು ನಿಗಧಿಪಡಿಸಿ, ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರ ದಲ್ಲಿ ನಿರ್ವಹಣೆ ಮಾಡಲಾಗುತ್ತಿದೆ. ಈ ಸಮಸ್ಯೆಗಳನ್ನು ಬಗೆಹರಿಸಲು ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರದಲ್ಲಿ ಇ-ಸ್ವತ್ತು ತಂತ್ರಾಂಶಕ್ಕೆ ಸಂಬಂಧಿಸಿದ 2 ಸರ್ವರ್‌ಗಳ Storage ಅನ್ನು ದುಪ್ಪಟ್ಟುಗೊಳಿಸಿ, ಸರ್ವರ್ ಗಳ Storage ಅನ್ನು ಹೆಚ್ಚಿಸಲಾಗಿದೆ. |
| ಆ) | ಇ-ಸ್ವತ್ತು ತಂತ್ರಾಂಶವನ್ನು ಖಾಸಗಿ ಸಂಸ್ಥೆಗೆ ನೀಡಲಾಗಿದೆಯೇ? ಹಾಗಿದ್ದಲ್ಲಿ, ನಿರ್ವಹಣೆ ಮಾಡುತ್ತಿರುವ ಸಂಸ್ಥೆಯ ವಿವರಗಳನ್ನು ನೀಡುವುದು) | ಇ-ಸ್ವತ್ತು ತಂತ್ರಾಂಶವನ್ನು ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಯಾವುದೇ ಖಾಸಗಿ ಸಂಸ್ಥೆಗೆ ನೀಡಲಾಗಿಲ್ಲ. ಇ-ಸ್ವತ್ತು ತಂತ್ರಾಂಶವನ್ನು ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ಎನ್.ಐ.ಸಿ ರವರಿಗೆ ಜವಾಬ್ದಾರಿ ವಹಿಸಲಾಗಿದೆ. |

ಸಂ: ಗ್ರಾಅಪ/33/ಇ-ಆಡಳಿತ/2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು.